# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,**
**ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗ, ಬಸವೇಶ್ವರ ಲೇಔಟ್, 3ನೇ ಮುಖ್ಯರಸ್ತೆ, ಕೈಲಾಶೇಶ್ವರ ದೇವಸ್ಥಾನ ಹಿಂಭಾಗ ಅತ್ತಿಗುಪ್ಪೆ, ಬೆಂಗಳೂರು-40,**

---

ಸಂಖ್ಯೆ: ಸ.ಕಾ.ನಿ.ಅ/ಗಾ.ಅ/ಪಿಆರ್/797/2020-21 ದಿನಾಂಕ:20-03-2021

## ದಿನಾಂಕ:20/03/2021 ರಂದು ವಾರ್ಡ ಸಂಖ್ಯೆ:132 ಅತ್ತಿಗುಪ್ಪೆ ವಾರ್ಡ ಸಮಿತಿ ಸಭೆ ನಡವಳಿಗಳು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ:132 ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆಯು ದಿನಾಂಕ:20-03-2020ರಂದು ಬೆಳ್ಳಿಗೆ 11:00 ಗಂಟೆಗೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು(ಗಾಳಿಆಂಜನೇಯ ದೇವಸ್ಥಾನ)ದಲ್ಲಿ ನಡೆದಿರುತ್ತದೆ. ಸಭೆಯ ನಡವಳಿಗಳು ಈ ಕೆಳಕಂಡಂತೆ

**ಸಭೆಗೆ ಹಾಜರಾಗಿ ಭಾಗವಹಿಸಿದ ಸದಸ್ಯರು ಮತ್ತು ಸಾರ್ವಜನಿಕರ ವಿವರ:**

| ಕ್ರಮ ಸಂಖ್ಯೆ | ಅಧಿಕಾರಿಗಳು ಮತ್ತು ಸದಸ್ಯರುಗಳ ಹೆಸರು | ಪದನಾಮ | ಇಲಾಖೆ | ಹಾಜರಾತಿ |
|---|---|---|---|---|
| 1 | ಶ್ರೀ ಬಸವರಾಜ ವೈ. ಅಂಬಿಗೇರ | ನೋಡೆಲ್ ಅಧಿಕಾರಿ | ಸಹಾಯಕ ಕಾನೂನು ಅಧಿಕಾರಿ, ಕಾನೂನು ಕೋಶ | ಹಾಜರಾಗಿರುತ್ತಾರೆ. |
| 2 | ಶ್ರೀ ಕೃಷ್ಣಮೂರ್ತಿ | ಕಾರ್ಯದರ್ಶಿಗಳು | ಸಹಾಯಕ ಅಭಿಯಂತರರು ವಾರ್ಡ ನಂ.132 | ಹಾಜರಾಗಿರುವುದಿಲ್ಲಾ. |
| 3 | ಶ್ರೀ ಮಾರುತಿ ಪಿ. ಸೇಟ್ | ಸದಸ್ಯರು | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ ನಂ.132 | ಹಾಜರಾಗಿರುತ್ತಾರೆ. |
| 4 | ಶ್ರೀ.ಗಂಗಣ್ಣಯ್ಯ | ಸದಸ್ಯರು | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.132 | ಹಾಜರಾಗಿರುತ್ತಾರೆ. |
| 5 | ಶ್ರೀ.ಎನ್.ಕೃಷ್ಣಮೂರ್ತಿ | ಸದಸ್ಯರು | ತೋಟಗಾರಿಕೆ | ಹಾಜರಾಗಿರುತ್ತಾರೆ. |
| 6 | ಶ್ರೀ.ಶಿವಕುಮಾರ್ | ಬೀದಿ ದೀಪಗಳ ನಿರ್ವಹಣೆ ಗುತ್ತಿಗೆದಾರರ | | ಹಾಜರಾಗಿರುತ್ತಾರೆ. |

20/3/2021

| | | | | |
|---|---|---|---|---|
| | | ಪ್ರತಿನಿಧಿ | | |
| 7 | ಶ್ರೀ.ಚಿದಾನಂದ.ಎಂ.ಬಿ | ಸದಸ್ಯರು | ಅರಣ್ಯ ಇಲಾಖೆ | ಹಾಜರಾಗಿರುತ್ತಾರೆ. |
| 8 | ಶ್ರೀ.ಚೇತನ್ ಕುಮಾರ್ | ಸದಸ್ಯರು | ಸಹಾಯಕ ಅಭಿಯಂತರರು (ಬೆಸ್ಕಾಂ) | ಹಾಜರಾಗಿರುತ್ತಾರೆ. |
| 9 | ಶ್ರೀ.ಹನುಮಂತಪ್ಪ.ಎಂ | ಸದಸ್ಯರು | ಪಶುಪಾಲನ ಇಲಾಖೆ | ಹಾಜರಾಗಿರುತ್ತಾರೆ. |
| 10. | ಶ್ರೀ.ಬಾಲರಾಜು | ಸದಸ್ಯರು | ಕಾಮಗಾರಿ ನಿರೀಕ್ಷಕರು | ಹಾಜರಾಗಿರುತ್ತಾರೆ. |
| 11. | ಶ್ರೀ.ಸಿ.ನಾರಾಯಣ | ಸದಸ್ಯರು | ಅಧ್ಯಕ್ಷರು ಚಂದ್ರಾಬಡಾವಣೆ ನಿವಾಸಿಗಳ ಸಂಘ | ಹಾಜರಾಗಿರುತ್ತಾರೆ. |

ವಾರ್ಡ್ ಕಮಿಟಿ ಸಭೆಯನ್ನು ನಡೆಸುವ ಕುರಿತಾಗಿ ದಿನಾಂಕ:15-3-2021ರಂದು ಸಭೆಯ ಸೂಚನಾ ಪತ್ರವನ್ನು ವಾರ್ಡ್-132ಕ್ಕೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ಕಳುಹಿಸಿಕೊಡಲಾಗಿರುತ್ತದೆ. ಹಾಗೂ ವಾರ್ಡ್-132 ವಾಟ್ಸ್ ಆಫ್ ಗ್ರೂಪ್ ಗೆ ನೋಟಿಸನ್ನು ಹಾಕಲಾಗಿರುತ್ತದೆ.

ಸಭೆಯ ಪ್ರಾರಂಭಿಕ ಹಂತದಲ್ಲಿ ವಾರ್ಡ ಸಮಿತಿಯ ಅಧ್ಯಕ್ಷರು ಹಾಗೂ ಸಹಾಯಕ ಕಾನೂನು ಅಧಿಕಾರಿ ರವರು ಸಭೆಯಲ್ಲಿ ತೆಗೆದುಕೊಂಡ ತೀರ್ಮಾನಗಳ ಬಗ್ಗೆ ಮತ್ತು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು. ಈ ಹಿಂದೆ ಸಭೆಯ ನಡವಳಿಯನ್ನು ದಾಖಲಿಸಿರುವಂತೆ ಸಭೆಯಲ್ಲಿ ಓದಲಾಯಿತು.

ಮೇಲೆ ಹಾಜರಿದ್ದ ಅಧಿಕಾರಿಗಳು ಮತ್ತು ಸಮೀತಿ ಸದಸ್ಯರು ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಾಂ, ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ ಮತ್ತು ಕಾಮಗಾರಿಕೆ ಇಲಾಖೆಗಳಿಗೆ ಸಂಬಂಧಿಸಿದಂತೆ, ಪ್ರಸ್ತುತ ಇರುವ ಸಮಸ್ಯೆಗಳನ್ನು ಮತ್ತು ಅವುಗಳನ್ನು ಪರಿಹಾರ ಮಾಡುವ ಕುರಿತಂತೆ ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

1. **ಕೋವಿಡ್-19**: ಕೋವಿಡ್-19 ವೈರಸ್ ಪರೀಕ್ಷೆ ವಾರ್ಡ್ ಮಟ್ಟದಲ್ಲಿ ನಡೆಯುತ್ತಿದ್ದು ವಾರ್ಡ್ ಮಟ್ಟದಲ್ಲಿ ಕೋರೊನ ಪಾಸಟೀವ್ ಪ್ರಕರಣಗಳು ಕಂಡುಬರುತ್ತಿಲ್ಲವೆಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿರುತ್ತಾರೆ. ಇದಲ್ಲದೇ ವ್ಯಾಕ್ಸಿನ್ ನೀಡುವಿಕೆ ವಾರ್ಡ್‌ನಲ್ಲಿ ಪ್ರಾರಂಭಿಸಲಾಗುವುದೆಂದು ತಿಳಿಸಿರುತ್ತಾರೆ. ಆದರೆ ವಾರ್ಡ್‌ನಲ್ಲಿ ಸೂಕ್ತ ಕಟ್ಟಡ ಇರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದಿರುತ್ತಾರೆ.

2. **ಘನತ್ಯಾಜ್ಯ ನಿರ್ವಹಣೆ:** ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಘನತ್ಯಾಜ್ಯ ನಿರ್ವಹಣೆ ಬಗ್ಗೆ ಸಭೆಗೆ ಮಾಹಿತಿಯನ್ನು ನೀಡುತ್ತಾರೆ. ವಾರ್ಡ್‌ನಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಚಿಸಲಾಯಿತು. ಮನೆಮನೆಗಳಿಂದ ಕಸ ಸಂಗ್ರಹಣೆ ಮಾಡಲು ಒಟ್ಟು ನಿಯೋಜಿಸಲಾಗಿರುವ ಪೌರಕಾರ್ಮಿಕರ ಸಂಖ್ಯೆಯನ್ನು ಮತ್ತು ಆಟೋ ಟಿಪ್ಪರ್‌ಗಳ ಕಾರ್ಯನಿರ್ವಹಿಸುವ ಸಂಖ್ಯೆಗಳನ್ನು ಕಾಲಕಾಲಕ್ಕೆ ವಾರ್ಡ್ ಮಟ್ಟದ ವಾಟ್ಸ್‌ಆಫ್ ಗ್ರೂಫ್‌ಗೆ ಹಾಕಲು

20/3/2021

ಈ ಹಿಂದಿನ ಸಭೆಯಲ್ಲಿ ತಿಳಿಸಿ ಸೂಚಿಸಲಾಗಿತ್ತು. ಆದರೆ ಕಿರಿಯ ಆರೋಗ್ಯ ಪರಿವೀಕ್ಷಕರು ಸದರಿ ಕಾರ್ಯವನ್ನು ಮಾಡಿರುವುದಿಲ್ಲ. ಆದ್ದರಿಂದ ವಾರ್ಡ್‌ನಲ್ಲಿ ದಿನಾಲು ಕೆಲಸಕ್ಕೆ ಹಾಜರಾಗುವ ಪೌರಕಾರ್ಮಿಕರ ಮತ್ತು ಟಿಪ್ಪರ್ ಸಂಖ್ಯೆಯನ್ನು ವಾಟ್ಸ್‌ಆಫ್ ಗ್ರೂಫ್‌ಗೆ ಹಾಕಲು ಸಭೆಯು ಸೂಚಿಸಿದೆ.

ವಾರ್ಡ್‌ನಲ್ಲಿ ಗುತ್ತಿಗೆದಾರರು ಘನ ತ್ಯಾಜ್ಯವನ್ನು ಸಂಗ್ರಹಿಸಿ ಸಾಗಾಣಿಕೆ ಮಾಡುವುದಲ್ಲಿ ವಿಫಲವಾಗಿದ್ದರಿಂದ ವಾರ್ಡಿನ ದಿನಾಂಕ:18–03–2021ರಂದು ನೋಟೀಸನ್ನು ಜಾರಿಗೊಳಿಸಿ ಕಸ ವಿಲೇವಾರಿಯನ್ನು ಈ ಕೂಡಲೇ ನಿರ್ವಹಿಸಲು ತಿಳಿಸಲಾಗಿರುತ್ತದೆ. ಒಂದುವೇಳೆ ಕಸ ವಿಲೇವಾರಿಯನ್ನು ಸರಿಯಾಗಿ ಮಾಡದಿದ್ದರೆ ಸರಬರಾಜು ಆದೇಶದನ್ವಯ ಸೂಕ್ತ ಕ್ರಮವಹಿಸಲಾಗುವುದೆಂದು ತಿಳಿಸಲಾಗಿರುತ್ತದೆ.

3. **ವಾರ್ಡ ಮಟ್ಟದ ಕಾಮಗಾರಿ:** ವಾರ್ಡ್ ಮಟ್ಟದಲ್ಲಿ ಪ್ರಸ್ತುತವಾಗಿ ಯಾವುದೇ ಕಾಮಗಾರಿಗಳು ನಡೆಯುತ್ತಿಲ್ಲವೆಂದು ಕಾಮಗಾರಿ ನಿರೀಕ್ಷಕರು ಸಭೆಯ ಗಮನಕ್ಕೆ ತಂದಿರುತ್ತಾರೆ.

4. **ಅರಣ್ಯ ವಿಭಾಗ:** ಈ ಹಿಂದೆ ನಡೆದ ಸಭೆಯಲ್ಲಿ ಹಾಜರಿದ್ದ ಸದಸ್ಯರಾದ ಶ್ರೀ ಸಿ.ಹೆಚ್.ಪೈ.ರವರು ವಿಲೇಜ್ ಹೈಪರ್ ದಿಂದ ಅಂತಿಮ ರಸ್ತೆ ರವರಿಗೂ ಬೆಳೆದ ಗಿಡಮರಗಳ ರೆಂಬೆಕೊಂಬೆಗಳನ್ನು ಕತ್ತರಿಸಲು ಕೋರಿಕೊಂಡಿರುತ್ತಾರೆ. ಸದರಿರವರ ಕೋರಿಕೆಯನ್ನು ಇಲ್ಲಿಯವರೆಗೆ ಪಾಲಿಕೆಯು ಪಾಲಿಸಿಲ್ಲವೆಂದು ಮತ್ತೊಮ್ಮೆ ಸಭೆಯ ಗಮನಕ್ಕೆ ತರುತ್ತಾ ತೆರವುಗೊಳಿಸಲು ಕೋರಿಕೊಂಡಿರುತ್ತಾರೆ. ಏಕೆಂದರೆ ಮರಗಳು ರೆಂಬೆ ಕೊಂಬೆಗಳ ನೆರಳಿನಿಂದಾಗಿ ಬೀದಿ ದೀಪಗಳ ಬೆಳಕು ಸರಿಯಾಗಿ ಬೀಳುತ್ತಿಲ್ಲವೆಂದು ಮತ್ತೊಮ್ಮೆ ಚರ್ಚಿಸಲಾಯಿತು. ಇದರ ಕುರಿತ್ತಾಗಿ ದಕ್ಷಿಣ ವಲಯದ ಅರಣ್ಯಾಧಿಕಾರಿಗಳೂ ಕ್ರಮವಹಿಸಲು ಸಭೆಯು ಸೂಚಿಸಿದೆ.

5. **ವಾರ್ಡನಲ್ಲಿರುವ ಫುಟ್‌ಪಾತ್**:ಗಳನ್ನು ಒತ್ತುವರಿ ಮಾಡಿದ್ದರೆ ತೆರವುಗೊಳಿಸಲು ಹಾಗೂ ರಸ್ತೆಗುಂಡಿಗಳನ್ನು ಮುಚ್ಚಲು ಮತ್ತು ಅನಧೀಕೃತ ಜಾಹೀರಾತು ಫಲಕಗಳನ್ನು ತೆರವುಗೊಳಿಸಿ ಕ್ರಮಕೈಗೊಳ್ಳಲು ವಾರ್ಡ್ ಸಂಖ್ಯೆ:132ರ ಸಹಾಯಕ ಅಭಿಯಂತರರಿಗೆ ಸಭೆಯು ಸೂಚಿಸಲಾಯಿತು. ಮಾನ್ಯ ಆಯುಕ್ತರವರ ಆದೇಶದ ಮೇರೆಗೆ ವಾರ್ಡ್ ನಲ್ಲಿರುವ ಫುಟ್‌ಪಾತ್‌ಗಳನ್ನು ಮತ್ತು ಬೀದಿಗಳನ್ನು ಸರಿಪಡಿಸಲು ಅಂತಹ ಜಾಗಗಳನ್ನು ಗುರುತಿಸಿ ಸಭೆ ಗಮನಕ್ಕೆ ತರಲು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:132ರವರನ್ನು ಕೋರುತಾ ಸೂಕ್ತ ಕ್ರಮಕೈಗೊಳ್ಳಲು ಸಭೆ ಸೂಚಿಸಿದೆ.

6. **ಬೀದಿ ದೀಪಗಳ ನಿರ್ವಹಣೆ:** ಬೀದಿ ದೀಪಗಳ ನಿರ್ವಹಣೆಗೆ ಸಂಬಂಧಿಸಿದಂತೆ ಹಲವಾರು ಬಾರಿ ಗಣಪತಿ ಸರ್ಕಲ್, ದಿವಾರ್ ಹೋಟೆಲ್ ಹತ್ತಿರ ದೀಪವನ್ನು ಹಾಕಲು ಶ್ರೀ.ಸಿ.ನಾರಾಯಣ ರವರು ಕೋರಿಕೊಂಡಿರುತ್ತಾರೆ. ಸಭೆಯಲ್ಲಿ ಹಾಜರಿರುವ ಕಿರಿಯ ಅಭಿಯಂತರರು(ವಿದ್ಯುತ್)ರವರಿಗೆ ಈ ಕೂಡಲೇ ದುರಸ್ಥಿಗೊಂಡಿರುವ ಬೀದಿ ದೀಪಗಳನ್ನು ಸರಿಪಡಿಸುವುದು ಮತ್ತು ಅಗತ್ಯ ಸ್ಥಳಗಳಲ್ಲಿ ಬೀದಿ ದೀಪಗಳನ್ನು ಅಳವಡಿಸಲು ಸೂಚಿಸಿದೆ.

20/3/2021

ಬಿ.ಸಿ.ಸಿ ಲೇಔಟ್‌ನ ರೈಲ್ವೆ ಪ್ಯಾರಲಲ್ ರಸ್ತೆಯಲ್ಲಿ ಹಲವಾರಿ ಬಾರಿ ನೋಡಲ್ ಅಧಿಕಾರಿಯಾದ ನನಗೆ ದೂರನ್ನು ನೀಡಿ ಬೀದಿ ದೀಪಗಳನ್ನು ಅಳವಡಿಸಲು ಆ ಏರಿಯಾದ ನಿವಾಸಿಗಳು ಕೋರಿಕೊಂಡಿರುತ್ತಾರೆ. ಈ ಹಿನ್ನೆಲೆಯಲ್ಲಿ ವಿದ್ಯುತ್ ದೀಪದ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ಅಗತ್ಯ ಸ್ಥಳಗಳಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸಲು ಸೂಚಿಸಲಾಗಿದೆ.

7. **ರಸ್ತೆಯ ಗುಂಡಿ:** ಮುಚ್ಚುವ ಬಗ್ಗೆ ಚರ್ಚಿಸಲಾಯಿತು. ರಸ್ತೆಯ ಗುಂಡಿಗಳನ್ನು ಕಾಲಕಾಲಕ್ಕೆ ಗುರುತಿಸಿ ಮುಚ್ಚಲು ಕ್ರಮಕೈಗೊಳ್ಳಲಾಗುತ್ತಿದೆಂದು ಸಹಾಯಕ ಅಭಿಯುಂತರರು ತಿಳಿಸಿರುತ್ತಾರೆ. ಸಭೆಯಲ್ಲಿ ಹಾಜರಿದ್ದ ಶ್ರೀ.ಸಿ.ನಾರಾಯಣ ಅಧ್ಯಕ್ಷರು ಚಂದ್ರ ಬಡಾವಣೆಯ ನಿವಾಸಿ ಸಂಘ ರವರು ನಾಗರಭಾವಿ ಹಂತದಿಂದ ಚಂದ್ರಾ ಲೇಔಟ್ 80 ಅಡಿ ರಸ್ತೆಯ ಗುಂಡಿಗಳನ್ನು ಮುಚ್ಚಲಾಗಿರುವುದನ್ನು ಸಭೆಯ ಗಮನಕ್ಕೆ ತಂದು ಪಾಲಿಕೆ ತೆಗೆದುಕೊಂಡ ಕ್ರಮಕ್ಕೆ ಸಂತಸ ವ್ಯಕ್ತಪಡಿಸಿರುತ್ತಾರೆ.
8. BWSSB: ಸದರಿ ಇಲಾಖೆಯಿಂದ ನಿಯೋಜಿಸಿದ ಅಧಿಕಾರಿಯು ಅನಿವಾರ್ಯ ಕಾರಣಗಳಿಂದ ಹಾಜರಾಗಿರುವುದಿಲ್ಲ. ಮುಂದಿನ ಸಭೆಯಲ್ಲಿ ತಪ್ಪದೇ ಹಾಜರಾಗಲು ಕೋರಿದೆ. ಹಾಗೂ ಈ ಹಿಂದಿನ ವಾರ್ಡ್ ಕಮಿಟಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನಗಳನ್ನು ಅನುಷ್ಠಾನಗೊಳಿಸಲು BWSSB ಇಲಾಖೆಗೆ ಸೂಚಿಸಿದೆ.

9. **ತೆರಿಗೆ:** ಸಭೆಯಲ್ಲಿ ಹಾಜರಿದ್ದ ಕಂದಾಯ ಪರಿವೀಕ್ಷಕರಿಗೆ ತೆರಿಗೆ ವಸೂಲಾತಿಯನ್ನು ಮಾಡಲು ಹಾಗೂ ಸುಸ್ತಿದಾರರಿಗೆ ನೋಟಿಸು ಜಾರಿ ಮಾಡಿ ವಸೂಲಾತಿ ಕ್ರಮಕೈಗೊಳ್ಳುವುದು ಹಾಗೂ ಕಂದಾಯ ವಸೂಲಾತಿ ಮಾಡುತ್ತಿರುವ ಬಗ್ಗೆ ವಿವರವನ್ನು ನೋಡಲ್ ಅಧಿಕಾರಿರವರಿಗೆ ವರದಿ ನೀಡಲು ಈ ಹಿಂದಿನ ಸಭೆಯಲ್ಲಿ ಸೂಚಿಸಲಾಗಿತ್ತು ಆದರೆ ಕಂದಾಯದ ವಿವರವನ್ನು ಸಲ್ಲಿಸಿರುವುದಿಲ್ಲ ಆದ್ದರಿಂದ ಮುಂದಿನ ಸಭೆಗೆ ಕಂದಾಯ ಪರಿವೀಕ್ಷಕರು ವಾರ್ಡ್ ಮಟ್ಟದಲ್ಲಿ ಸಂಗ್ರಹವಾಗುವ ತೆರಿಗೆ ವಿವರವನ್ನು ಸಭೆಗೆ ಸಲ್ಲಿಸಲು ಸೂಚಿಸಿದೆ.
10. **ಪಶುಪಾಲನೆ:** ಪಾಲಿಕೆಯ ಪಶುಪಾಲನ ಇಲಾಖೆಯಿಂದ ಶ್ರೀ.ಹನುಮಂತ್‌ರಾಜು ಎಂಬ ಹಿರಿಯ ನಿರೀಕ್ಷಕರು ಹಾಜರಾಗಿದ್ದರು ಸಭೆಯಲ್ಲಿ ವಾರ್ಡ್ ಮಟ್ಟದಲ್ಲಿ ಮಾಂಸದ ಅಂಗಡಿಗಳಿಂದ ಉತ್ಪತ್ತಿಯಾಗುವ ಮಾಂಸದ ತ್ಯಾಜ್ಯವು ಹೇಗೆ ವಿಲೇವಾರಿ ಮಾಡಲಾಗುತ್ತದೆ ಎಂಬುದನ್ನು ಚಂದ್ರ ಬಡಾವಣೆ ನಿವಾಸಿಗಳ ಸಂಘದ ಅಧ್ಯಕ್ಷರು ಸದರಿ ಅಧಿಕಾರಿಯನ್ನು ಕೋರಲಾಗಿ, ಸದರಿಯವರು ಮಾಂಸದ ಹಸಿ ತ್ಯಾಜ್ಯವನ್ನು ತಮ್ಮ ಇಲಾಖೆಯಿಂದ ನಾವು ನಿರ್ವಹಣೆ ಮಾಡುವುದಿಲ್ಲವೆಂದು ಸಭೆಗೆ ತಿಳಿಸುತ್ತಾ SWM ಇಲಾಖೆ ಮಾಡುತ್ತದೆಂದು ತಿಳಿಸಿರುತ್ತಾರೆ. ಇದಲ್ಲದೇ ಹಸಿ ತ್ಯಾಜ್ಯವು ವಾರ್ಡ್‌ದಿಂದ ಯಾವ ರೀತಿ ವಿಲೇ ಮಾಡುತ್ತದೆಂದು ಸದಸ್ಯರು ಮುಂದಿನ ಸಭೆಯಲ್ಲಿ ತಿಳಿಸಬೇಕೆಂದು ಕೋರಿಕೊಂಡಿರುತ್ತಾರೆ.

ಸಭೆಯ ವಾರ್ಡ ಸಮಿತಿಯ ಅಧ್ಯಕ್ಷರು ವಾರ್ಡ ಮಟ್ಟದ ಎಲ್ಲ ಅಧಿಕಾರಿ ಮತ್ತು ಸಿಬ್ಬಂದಿಗಳ ನಡುವೆ ಸಮನ್ವಯ ಸಾಧಿಸಲು ವಾಟ್ಸ್ ಅಪ್ ಗ್ರೂಪ್‌ನ್ನು ಮಾಡಲಾಗಿದ್ದು, ಕಾಲಕಾಲಕ್ಕೆ ಆಯಾ

20/3/2021

ಸಂಬಂಧಪಟ್ಟ ಇಲಾಖೆ ಸಿಬ್ಬಂದಿ ಮತ್ತು ಅಧಿಕಾರಿಗಳ ಮಾಹಿತಿಯನ್ನು ಹಂಚಿಕೆ ಮಾಡಿಕೊಂಡು ಸಾರ್ವಜನಿಕ ಕುಂದುಕೊರತೆಗಳನ್ನು ಬಗೆಹರಿಸಿಕೊಂಡು ಕ್ರಮವಹಿಸಬೇಕೆಂದು ತಿಳಿಸಿರುತ್ತಾರೆ.

ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರೆತಗಳನ್ನು ಆಲಿಸಿ ಸ್ಪಂದಿಸಿ ಪರಿಹರಿಸಲು ಕ್ರಮತೆಗೆದುಕೊಂಡು ಆಯಾ ಸಂಬಂಧಪಟ್ಟ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು. ಅಧ್ಯಕ್ಷರು ವಂದನಾರ್ಪಣೆ ಮಾಡಿ ಸಭೆಯನ್ನು ಮುಕ್ತಾಯಗೊಳಿಸಿದರು.

20/03/2021

**ನೋಡೆಲ್ ಅಧಿಕಾರಿ**

ವಾರ್ಡ ಸಂಖ್ಯೆ,132, ಅತ್ತಿಗುಪ್ಪೆ